## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ. ವಿನಯ ಎ. ಹೆಗಡೆ ಬಿನ್ ಅನಂತ ಹೆಗಡೆ, 2268/4, ರಶ್ಮಿ ಬಿಲ್ಡಿಂಗ್, 7ನೇ ಮುಖ್ಯ ರಸ್ತೆ, ಎಂ.ಸಿ.ಸಿ. 'ಎ' ಬ್ಲಾಕ್, ದಾವಣಗೆರೆ ಇವರನ್ನು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರ ಆಪ್ತ ಶಾಖೆಯಲ್ಲಿ ಖಾಲಿಯಿರುವ ಕನ್ನಡ ಶೀಘ್ರಲಿಪಿಗಾರರ ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡುವ ಬಗ್ಗೆ.

**ಓದಲಾಗಿದೆ:**

1) ಅಧಿಸೂಚನೆ ಸಂಖ್ಯೆ:ಪಿಡಿ 48 ಎಸ್‌ಪಿಬಿ 2014 ದಿನಾಂಕ:13.06.2014.
2) ಅಧಿಸೂಚನೆ ಸಂಖ್ಯೆ:ಸಿಆಸುಇ 78 ಸಿಸಸೇ 2014 ದಿನಾಂಕ:16.06.2014.
3) ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 125 ಸಿಸಸೇ 2002 ದಿನಾಂಕ:27.11.2002.
4) ಮಾನ್ಯ ಉಪಾಧ್ಯಕ್ಷ ಟಿಪ್ಪಣಿ ಸಂಖ್ಯೆ:KSPB/ADM/02/014/59 ದಿನಾಂಕ:25.08.2014.
5) ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 237 ಆಕಿಸೇ 2012 ದಿನಾಂಕ:27.07.2012.

**ಪ್ರಸ್ತಾವನೆ:**

ಮೇಲೆ ಓದಲಾದ(1)ರ ಅಧಿಸೂಚನೆಯಲ್ಲಿ ಶ್ರೀ. ಸಿ.ಎಂ. ಇಬ್ರಾಹಿಂ, ಮಾಜಿ ಸಚಿವರು, ಇವರನ್ನು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರನ್ನಾಗಿ ನೇಮಕಾತಿ ಮಾಡಲಾಗಿದೆ ಹಾಗೂ ಮೇಲೆ ಓದಲಾದ(2)ರ ಅಧಿಸೂಚನೆಯಲ್ಲಿ ಇವರಿಗೆ ಸಂಪುಟ ದರ್ಜೆ ಸಚಿವರ ಸ್ಥಾನಮಾನವನ್ನು ನೀಡಲಾಗಿದೆ. ಮೇಲೆ ಓದಲಾದ (3)ರ ಸರ್ಕಾರಿ ಆದೇಶದಲ್ಲಿ ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರ ಆಪ್ತ ಶಾಖೆಗೆ 12 ವಿವಿಧ ದರ್ಜೆಯ ಹುದ್ದೆಗಳನ್ನು ನಿಯೋಜನೆ/ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಸರ್ಕಾರವು ಅನುಮತಿ ನೀಡಿದೆ.

ಮೇಲೆ ಓದಲಾದ (4)ರ ಟಿಪ್ಪಣಿಯಲ್ಲಿ ಶ್ರೀ. ವಿನಯ ಎ. ಹೆಗಡೆ ಇವರನ್ನು ಗುತ್ತಿಗೆ ಆಧಾರದ ಮೇಲೆ ಖಾಲಿಯಿರುವ ಕನ್ನಡ ಶೀಘ್ರಲಿಪಿಗಾರರ ಹುದ್ದೆಗೆ ನೇಮಕಾತಿ ಮಾಡುವಂತೆ ರಾಜ್ಯ ಯೋಜನಾ ಮಂಡಳಿಯ ಮಾನ್ಯ ಉಪಾಧ್ಯಕ್ಷರು ಸೂಚಿಸಿರುತ್ತಾರೆ. ಮೇಲೆ ಓದಲಾದ (5) ರ ಅಧಿಕೃತ ಜ್ಞಾಪನದಲ್ಲಿ ಮಾನ್ಯ ಮುಖ್ಯ ಮಂತ್ರಿಯವರ ಸಚಿವಾಲಯ/ಸಚಿವರ/ವಿಧಾನ ಸಭೆ/ವಿಧಾನ ಪರಿಷತ್ತು/ರಾಜ್ಯ ಸಭೆ/ಲೋಕ ಸಭೆ ಸದಸ್ಯರ ಸಚಿವರ ಸ್ಥಾನಮಾನ ಪಡೆದ ಪ್ರಾಧಿಕಾರಗಳ ಆಪ್ತ ಸಿಬ್ಬಂದಿ ಶಾಖೆಗಳಲ್ಲಿ ಮತ್ತು ಕೆಲವು ಆಯೋಗಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಚಿತ ವೇತನವನ್ನು ಪರಿಷ್ಕರಿಸಲಾಗಿರುತ್ತದೆ.

**ಸರ್ಕಾರಿ ಆದೇಶ ಸಂಖ್ಯೆ:ಪಿಡಿ 20 ಎಸ್‌ಪಿಬಿ 2014**
**ಬೆಂಗಳೂರು, ದಿನಾಂಕ:2ನೇ ಸೆಪ್ಟೆಂಬರ್ 2014.**

ಮೇಲ್ಕಂಡ ವಿಷಯವನ್ನು ಪರಿಶೀಲಿಸಿದ ಸರ್ಕಾರವು, ಶ್ರೀ. ವಿನಯ ಎ. ಹೆಗಡೆ ಬಿನ್ ಅನಂತ ಹೆಗಡೆ, 2268/4, ರಶ್ಮಿ ಬಿಲ್ಡಿಂಗ್, 7ನೇ ಮುಖ್ಯ ರಸ್ತೆ, ಎಂ.ಸಿ.ಸಿ. 'ಎ' ಬ್ಲಾಕ್, ದಾವಣಗೆರೆ ಇವರನ್ನು ಇವರನ್ನು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರ ಆಪ್ತ ಶಾಖೆಯಲ್ಲಿ ಖಾಲಿಯಿರುವ ಕನ್ನಡ ಶೀಘ್ರಲಿಪಿಗಾರರ ಹುದ್ದೆಗೆ (ಗ್ರೂಪ್ – ಸಿ) ಗುತ್ತಿಗೆ ಆಧಾರದ ಮೇಲೆ ದಿನಾಂಕ:25.8.2014 ರಿಂದ ಜಾರಿಗೆ ಬರುವಂತೆ ನೇಮಕ ಮಾಡಲಾಗಿದೆ. ಈ ಒಪ್ಪಂದದ ನೇಮಕಾತಿಯು ಕೆಳಕಂಡ ನಿಬಂಧನೆ ಹಾಗೂ ಷರತ್ತುಗಳಿಗೆ ಒಳಪಟ್ಟಿರುತ್ತದೆ.

56



1. ಶ್ರೀ. ವಿನಯ ಎ. ಹೆಗಡೆ ಇವರ ಗುತ್ತಿಗೆ ನೇಮಕಾತಿ ಅವಧಿಯು ದಿನಾಂಕ:25.08.2014 ರಿಂದ ಒಂದು ವರ್ಷದ ವರೆಗೆ ಅಥವಾ ಮಾನ್ಯ ಉಪಾಧ್ಯಕ್ಷರ ಅವಧಿ ಅಥವಾ ಮುಂದಿನ ಆದೇಶ ಹೊರಡಿಸುವವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಇದ್ದು ಇದೊಂದು <u>ತಾತ್ಕಾಲಿಕ ನೇಮಕಾತಿ</u> ಆಗಿರುತ್ತದೆ.

2. ಇವರ ಗುತ್ತಿಗೆ ನೇಮಕಾತಿಗೆ ಮಾಸಿಕ ರೂ.16,000/- (ಹದಿನಾರು ಸಾವಿರ ರೂಪಾಯಿಗಳು ಮಾತ್ರ) ಕ್ರೋಢೀಕೃತ (ಸಂಚಿತ) ವೇತನವನ್ನು ನಿಗದಿಪಡಿಸಲಾಗಿದೆ. <u>ಇದಲ್ಲದೆ ಇನ್ನಿತರ ಯಾವುದೇ ಭತ್ಯೆಗಳಿಗೂ ಇವರು ಅರ್ಹರಾಗಿರುವುದಿಲ್ಲ.</u>

3. ಸದರಿ ಗುತ್ತಿಗೆ ನೌಕರರು ಸಾರ್ವಜನಿಕ ಹಿತ ದೃಷ್ಟಿಯಿಂದ ಪ್ರಯಾಣ ಮಾಡಬೇಕಾದಲ್ಲಿ ಮಾತ್ರ ಇವರ ನೇಮಕಾತಿ ಹೊಂದಿರುವ ಹುದ್ದೆಯ ಹಾಲಿ ವೇತನ ಶ್ರೇಣಿಯ ಕನಿಷ್ಠ ವೇತನದ ಮೇಲೆ ನಿಯಮಾನುಸಾರ ಲಭ್ಯವಿರುವ ಪ್ರಯಾಣ ಭತ್ಯೆ ಮತ್ತು ದಿನ ಭತ್ಯೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.

4. ಸದರಿ ಗುತ್ತಿಗೆ ನೌಕರರು ವಾರ್ಷಿಕ 15 ದಿನಗಳ ಸಾಂದರ್ಭಿಕ ರಜೆಯನ್ನು ಮಾತ್ರ ಪಡೆಯಲು ಅರ್ಹರಾಗಿರುತ್ತಾರೆ.

5. ಒಪ್ಪಂದದ ಷರತ್ತು ಮತ್ತು ನಿಬಂಧನೆಗಳಲ್ಲಿ ನೀಡಿರುವ ಸೌಲಭ್ಯಗಳ ಹೊರತಾಗಿ ಬೇರಾವುದೇ ಸೌಲಭ್ಯಕ್ಕೆ ಅಂದರೆ ವೇತನ ಬಡ್ತಿ, ಪದೋನ್ನತಿ, ಪಿಂಚಣಿ ಇತ್ಯಾದಿ ಸೌಲಭ್ಯಗಳಿಗೆ ಸದರಿ ಗುತ್ತಿಗೆ ನೌಕರರು ಅರ್ಹರಾಗಿರುವುದಿಲ್ಲ.

6. ಸದರಿ ನೌಕರರ ದುರ್ವರ್ತನೆ, ನಿರ್ಲಕ್ಷತೆಯ ನಿಮಿತ್ತ ಸರ್ಕಾರಕ್ಕೆ ನಷ್ಟ ಉಂಟಾದಲ್ಲಿ ಆ ಎಲ್ಲಾ ನಷ್ಟಗಳನ್ನು ಸದರಿ ನೌಕರರು ಭರಿಸಿಕೊಡಲು ಬದ್ಧರಾಗಿರತಕ್ಕದ್ದು.

7. ಸದರಿ ಗುತ್ತಿಗೆ ನೇಮಕಾತಿಯನ್ನು ಯಾವುದೇ ಕಾರಣಕ್ಕೂ ಖಾಯಂ ಎಂದು ಪರಿಗಣಿಸಲಾಗುವುದಿಲ್ಲ. ಇವರು ತಮ್ಮ ಕರ್ತವ್ಯ, ಕಾರ್ಯ ಮತ್ತು ಪ್ರಕಾರ್ಯಗಳನ್ನು ಶ್ರದ್ಧೆ, ಭಕ್ತಿ ಮತ್ತು ಆಸಕ್ತಿಯಿಂದ ನೆರವೇರಿಸತಕ್ಕದ್ದು.

8. ಈ ಗುತ್ತಿಗೆ ಆಧಾರಿತ ಸೇವಾವಧಿಯಲ್ಲಿ ಇವರು ತಮಗೆ ಲಭ್ಯವಾಗಬಹುದಾದ ಅಥವಾ ದೊರಕಬಹುದಾದ ಕಛೇರಿಯ/ಮಂಡಳಿಯ ಯಾವುದೇ ಗೌಪ್ಯ ಮಾಹಿತಿಯನ್ನು ಅಥವಾ ಅಧಿಕೃತ ಮಾಹಿತಿಯನ್ನು ನೌಕರರು ಗೌಪ್ಯವಾಗಿಡಬೇಕು ಹಾಗೂ ಆನಂತರವೂ ಅದನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

9. 1966ರ ಕರ್ನಾಟಕ ನಾಗರಿಕ ಸೇವಾ(ನಡತೆ) ನಿಯಮಾವಳಿ ಮತ್ತು 1957ರ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗೆ ಇವರು ಬದ್ಧರಾಗಿರತಕ್ಕದ್ದು.

10. ಈ ಒಪ್ಪಂದದ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ನಿಮ್ಮ ಗುತ್ತಿಗೆ ನೇಮಕಾತಿಯು ತಾನಾಗಿಯೇ ಮುಕ್ತಾಯಗೊಳ್ಳುತ್ತದೆ.

11. ಇವರು ತಮ್ಮ ದುರ್ನಡತೆಯಿಂದಾಗಲೀ ಅಥವಾ ನಿರ್ಲಕ್ಷ್ಯದಿಂದ, ಉದಾಸೀನತೆಯಿಂದಾಗಲಿ ಸರ್ಕಾರಕ್ಕೆ ಉಂಟಾಗಬಹುದಾದ ಆರ್ಥಿಕ ನಷ್ಟವನ್ನು ತುಂಬಿಕೊಡಲು ಬದ್ಧರಾಗಿರತಕ್ಕದ್ದು.

12. ಈ ಆದೇಶವನ್ನು ಸ್ವೀಕರಿಸಿದ ದಿನಾಂಕದಿಂದ ಏಳು ದಿನಗಳೊಳಗಾಗಿ ರೂ.50/- (ಐವತ್ತು ರೂಪಾಯಿಗಳು) ಗಳ ಮೌಲ್ಯದ ಛಾಪಾ ಕಾಗದದಲ್ಲಿ ಸದರಿ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಒಳಗೊಂಡಿರುವ ಕರಾರು ಪತ್ರವನ್ನು ಕ್ರಮಬದ್ಧ ರೀತಿಯಲ್ಲಿ ಸದರಿ ನೌಕರರು ತಮ್ಮ ಒಪ್ಪಿಗೆಯನ್ನು ನಮೂದಿಸಿ ಸಲ್ಲಿಸತಕ್ಕದ್ದು ಹಾಗೂ ವಿದ್ಯಾರ್ಹತೆಯ ಮೂಲ ಪ್ರತಿಗಳನ್ನು ಸಲ್ಲಿಸತಕ್ಕದ್ದು.

13. ಆದೇಶ ಸಂಖ್ಯೆ:ಪಿಡಿ 113 ಎಸ್ ಪಿಎಂ 96, ದಿನಾಂಕ:17.05.1997 ರಲ್ಲಿ ರಾಜ್ಯ ಯೋಜನಾ ಮಂಡಳಿಯ ಸದಸ್ಯ ಕಾರ್ಯದರ್ಶಿಯವರಿಗೆ ನೀಡಲಾದ ಅಧಿಕಾರ ಪ್ರತ್ಯಾಯೋಜನೆಯನ್ವಯ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

( ಎಸ್.ಎಸ್. ಜಯಧರ )
ಸರ್ಕಾರದ ಅಧೀನ ಕಾರ್ಯದರ್ಶಿ-3,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.
ದೂ:22032623
planningboard122@gmail.com

ಇವರಿಗೆ:

1. ಮಹಾಲೇಖಪಾಲರು, (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ. ಹಾಗೂ ಪದನಿಮಿತ್ತ ಸದಸ್ಯ ಕಾರ್ಯದರ್ಶಿಗಳು, ರಾಜ್ಯ ಯೋಜನಾ ಮಂಡಳಿ.
3. ಸರ್ಕಾರದ ಕಾರ್ಯದರ್ಶಿ, ಯೋಜನಾ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
4. ಮಾನ್ಯ ಉಪಾಧ್ಯಕ್ಷರ ಆಪ್ತ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ, ವಿಕಾಸ ಸೌಧ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿ, ಯೋಜನಾ ಇಲಾಖೆ(ಆಡಳಿತ).
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-6).
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8. ಸಹಾಯಕ ಖಜಾನಾಧಿಕಾರಿ, ಯೋಜನಾ ಇಲಾಖೆ, ಎಸ್-3 ಶಾಖೆ.
9. ಶ್ರೀ. ವಿನಯ ಎ. ಹೆಗಡೆ ಬಿನ್ ಅನಂತ ಹೆಗಡೆ, 2268/4, ರೆಡ್ಡಿ ಬಿಲ್ಡಿಂಗ್, 7ನೇ ಮುಖ್ಯ ರಸ್ತೆ, ಎಂ.ಸಿ.ಸಿ. 'ಎ' ಬ್ಲಾಕ್, ದಾವಣಗೆರೆ-577004.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.